# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ (ಸಿ.ಐ.ಎನ್.) : ಯು40109ಕೆಎ1999ಎಸ್‌ಜಿಸಿ025521

**ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560 009.**

ದೂರವಾಣಿ ಸಂಖ್ಯೆ : 080-22212343

ಅಂತರ್ಜಾಲ : https://kptcl.karnataka.gov.in

ಇ-ಮೇಲ್ ವಿಳಾಸ : director.ahr.kptcl@gmail.com


**ವಿಷಯ:** ಹೊನ್ನಾವರ 110/11 ಕೆ.ವಿ ಉಪಕೇಂದ್ರದ ಆವರಣದಲ್ಲಿ ಹೆಸ್ಕಾಂನ ನೂತನ ವಿಭಾಗೀಯ ಕಛೇರಿ ಕಟ್ಟಡ ನಿರ್ಮಿಸಲು ಕವಿಪ್ರನಿನಿ ಜಾಗವನ್ನು ಲೀಸ್ ಆಧಾರದ ಮೇಲೆ ನೀಡುವ ಬಗ್ಗೆ.

**ಉಲ್ಲೇಖ:**
1. ಕವಿಪ್ರನಿನಿ/ಬಿ9/4948/04-05 ದಿನಾಂಕ 29/04/2005.
2. ಕವಿಪ್ರನಿನಿ/ಬಿ9/4948/04-05 ದಿನಾಂಕ 26/10/2006.
3. ಮುಖ್ಯ ಇಂಜಿನಿಯರ್ (ವಿ), ಪ್ರಸರಣ ವಲಯ, ಬಾಗಲಕೋಟೆ ರವರ ಪತ್ರ ಸಂಖ್ಯೆ: 27924-25 ದಿನಾಂಕ 15/03/2023
4. ದಿನಾಂಕ 19/07/2023 ರಂದು ನಡೆದ 140 ನೇ ಕವಿಪ್ರನಿನಿ ಮಂಡಳಿ ನಿರ್ದೇಶಕರುಗಳ ಸಭೆ ನಡವಳಿಗಳು.

**ಪೀಠಿಕೆ:**

1. ಹೊನ್ನಾವರ 110 ಕೆ.ವಿ. ಉಪಕೇಂದ್ರದ ಆವರಣದ ಸರ್ವೆ ಸಂಖ್ಯೆ 236/ಅ/1ಬ ರಲ್ಲಿ 5-00 ಎಕರೆ ಜಮೀನು ಕವಿಪ್ರನಿನಿ ಒಡೆತನದಲ್ಲಿರುತ್ತದೆ. ಸದರಿ ಜಾಗ ಅರಣ್ಯ ಇಲಾಖೆಗೆ ಸೇರಿದೆಯೆಂದು ಈ ಹಿಂದೆ ಅರಣ್ಯ ಇಲಾಖೆ ನೋಟೀಸ್ ನೀಡಿತ್ತು. ದಿನಾಂಕ 06/02/2023 ರಂದು ಸದರಿ ಜಾಗವನ್ನು ಕಂದಾಯ ಇಲಾಖೆ ಹಾಗೂ ಅರಣ್ಯ ಇಲಾಖೆಯಿಂದ ಜಂಟಿಯಾಗಿ ಸರ್ವೆ ಮಾಡಿಸಿದ್ದು, ಸದರಿ ಜಾಗ ಕವಿಪ್ರನಿನಿ ಆಸ್ತಿಯೆಂದು ಖಚಿತಗೊಂಡಿದೆ. ಹಾಗೂ ಪ್ರಸ್ತುತ ಸದರಿ ಜಾಗದ ಆರ್.ಟಿ.ಸಿ ಕವಿಪ್ರನಿನಿ ಹೆಸರಿನಲ್ಲಿರುತ್ತದೆ.

2. ಸದರಿ ಆವರಣದಲ್ಲಿ ನಿಗಮದ 110 ಕೆ.ವಿ. ಉಪಕೇಂದ್ರ, ಹೆಸ್ಕಾಂನ ಉಪವಿಭಾಗ ಕಛೇರಿ, ಉಗ್ರಾಣ ಹಾಗೂ ನಿಗಮದ ವಸತಿ ಗೃಹಗಳನ್ನು ನಿರ್ಮಿಸಲಾಗಿದೆ. ಪ್ರಸ್ತುತ, ಹೆಸ್ಕಾಂನ ಉಪವಿಭಾಗ ಕಛೇರಿ/ಉಗ್ರಾಣಗಳು ನಿಗಮದ ಕಟ್ಟಡದಲ್ಲಿ ಬಾಡಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದೆ. ಹೊನ್ನಾವರದಲ್ಲಿ ಹೆಸ್ಕಾಂನ ನೂತನ ವಿಭಾಗ ಕಛೇರಿ ಮಂಜೂರಾಗಿದ್ದು, ಸದರಿ ಕಛೇರಿ ಖಾಸಗಿ ಕಟ್ಟಡದಲ್ಲಿ ಬಾಡಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತದೆ. ಆದ ಕಾರಣ, ಹೊನ್ನಾವರ 110 ಕೆ.ವಿ ಉಪಕೇಂದ್ರದ ಆವರಣದಲ್ಲಿ ಖಾಲಿ ಇರುವ ಸುಮಾರು 60 ಮೀ. X 68 ಮೀ. ಅಳತೆಯ ಜಾಗವನ್ನು ನೂತನ ವಿಭಾಗ ಕಛೇರಿ ಕಟ್ಟಡವನ್ನು ನಿರ್ಮಿಸಲು, ಲೀಸ್ ಆಧಾರದ ಮೇಲೆ ನೀಡಲು, ಹೆಸ್ಕಾಂ ಕೋರಿಕೆ ಸಲ್ಲಿಸಿತ್ತು.

3. ಮುಖ್ಯ ಇಂಜಿನಿಯರ್ (ವಿ), ಪ್ರಸರಣ ವಲಯ, ಬಾಗಲಕೋಟೆ ರವರು ಹೊನ್ನಾವರ 110 ಕೆ.ವಿ ಉಪಕೇಂದ್ರದ ಆವರಣದಲ್ಲಿ ಹೆಸ್ಕಾಂನ ನೂತನ ವಿಭಾಗ ಕಛೇರಿ ಕಟ್ಟಡವನ್ನು ನಿರ್ಮಿಸಲು ಸದರಿ ಆವರಣದಲ್ಲಿ 60 ಮೀ. X 68 ಮೀ. ವಿಸ್ತೀರ್ಣದ ಜಾಗವನ್ನು (ನಕ್ಷೆಯಲ್ಲಿ ಗುರುತಿಸಿರುವಂತೆ) 30 ವರ್ಷಗಳ ಲೀಸ್ ಆಧಾರದ ಮೇಲೆ ನೀಡಬಹುದೆಂದು ಉಲ್ಲೇಖ (3) ರ ಪತ್ರದಲ್ಲಿ ಪ್ರಸ್ತಾವನೆ ಸಲ್ಲಿಸಿರುತ್ತಾರೆ, ಮುಖ್ಯ ಇಂಜಿನಿಯರ್ (ವಿ), (ಯೋ ಮತ್ತು ಸ) ರವರ ಕಛೇರಿಯ ಟಿಪ್ಪಣಿಯಲ್ಲಿ ಸದರಿ ಜಾಗವನ್ನು ಹೆಸ್ಕಾಂಗೆ ನೀಡುವುದರಿಂದ ಹಾಲಿ ಇರುವ ಉಪಕೇಂದ್ರದ ವಿಸ್ತರಣೆಗೆ ಅಡಚಣೆ ಉಂಟಾಗುವುದಿಲ್ಲವೆಂದು ತಿಳಿಸಿರುತ್ತಾರೆ.

4. ಕವಿಪ್ರನಿನಿ ಯ ಒಡೆತನದಲ್ಲಿದ್ದ ಒಟ್ಟಾರೆ ಆಸ್ತಿಯನ್ನು ಪ್ರಸರಣ ಆಸ್ತಿ ಹಾಗೂ ವಿತರಣಾ ಆಸ್ತಿಗಳೆಂದು ವರ್ಗೀಕರಿಸಿದ ನಂತರ, ಎಸ್ಕಾಂ ಗಳಿಗೆ ಅವಶ್ಯವಿರುವ ಕವಿಪ್ರನಿನಿ ಜಾಗವನ್ನು ಹಾಗೂ ಕವಿಪ್ರನಿನಿ ಗೆ ಅವಶ್ಯವಿರುವ ಎಸ್ಕಾಂ ಗಳ ಜಾಗಗಳನ್ನು ಲೀಸ್ ಆಧಾರದ ಮೇಲೆ ನೀಡುವ ಬಗ್ಗೆ, ದಿನಾಂಕ 29/04/2005 ರ ಆದೇಶದಲ್ಲಿ Arms-Length

Arrangement ನ್ನು ಅನುಮೋದಿಸಲಾಗಿದೆ. ಸದರಿ ಆದೇಶದನ್ವಯ, ಕವಿಪ್ರನಿನಿ ಯಿಂದ ಎಸ್ಕಾಂಗಳಿಗೆ ಲೀಸ್ ಆಧಾರದ ಮೇಲೆ ನೀಡುವ ಜಾಗಗಳ ವಾರ್ಷಿಕ ಲೀಸ್ ಮೊತ್ತವನ್ನು ಸಾಂಕೇತಿಕವಾಗಿ ಪ್ರಚಲಿತ ಮಾರ್ಗಸೂಚಿ ಬೆಲೆಯ 0.1% ರಂತೆ ನಿಗಧಿಪಡಿಸಬಹುದಾಗಿದ್ದು, ಸದರಿ ಲೀಸ್ ಮೊತ್ತವನ್ನು ಪ್ರತಿ 5 ವರ್ಷಗಳಿಗೊಮ್ಮೆ ಅಂದಿನ ಮಾರ್ಗಸೂಚಿ ಬೆಲೆಯನ್ವಯ ಪರಿಷ್ಕರಿಸಬಹುದಾಗಿರುತ್ತದೆ.

5. ಈ ಹಿನ್ನೆಲೆಯಲ್ಲಿ, ಹೊನ್ನಾವರ 110 ಕೆ.ವಿ ಉಪಕೇಂದ್ರದ ಆವರಣದಲ್ಲಿ ಹೆಸ್ಕಾಂ ಕೋರಿಕೆಯಂತೆ 60 ಮೀ. X 68 ಮೀ. ಅಳತೆಯ ಜಾಗವನ್ನು ನೂತನ ವಿಭಾಗೀಯ ಕಛೇರಿ ಕಟ್ಟಡವನ್ನು ನಿರ್ಮಿಸಲು ಕವಿಪ್ರನಿನಿ ಮತ್ತು ಎಸ್ಕಾಂ ಗಳ ನಡುವೆ ಚಾಲ್ತಿಯಲ್ಲಿರುವ Arms-Length Arrangement ರನ್ವಯ, ಹೆಸ್ಕಾಂ ಗೆ 30 ವರ್ಷಗಳ ಲೀಸ್ ಆಧಾರದ ಮೇಲೆ ನೀಡುವ ಪ್ರಸ್ತಾವನೆಯನ್ನು, ಅನುಮೋದನೆಗಾಗಿ ಮಂಡಳಿಯ ಸಭೆಯ ಮುಂದೆ ಮಂಡಿಸಲಾಗಿತ್ತು.

6. ಸದರಿ ಪ್ರಸ್ತಾವನೆಯನ್ನು ದಿನಾಂಕ 19/07/2023 ರಂದು ನಡೆದ 140 ನೇ ಕವಿಪ್ರನಿನಿ ಮಂಡಳಿ ನಿರ್ದೇಶಕರುಗಳ ಸಭೆಯಲ್ಲಿ ಈ ಕೆಳಕಂಡಂತೆ ನಿರ್ಣಯಿಸಲಾಗಿದೆ.

*RESOLVED THAT approval be and is hereby accorded to spare the identified land measuring 60 Mtrs X 68 Mtrs of land at 110 kV station premises, Honnavara to HESCOM for a period of 30 years as per the Arms-length arrangement between KPTCL and Escoms, for construction of their new Divisional Office Building subject to ascertaining that HESCOM has cleared all the outstanding dues, if any, and lease amount in the jurisdication of Transmission Zone, Bagalkote.*

*FURTHER RESOLVED THAT Director (Admin. & HR), KPTCL be and is hereby authorized to issue necessary orders accordingly.*

ಈ ಹಿನ್ನೆಲೆಯಲ್ಲಿ, ಕೆಳಕಂಡಂತೆ ಆದೇಶಿಸಲಾಗಿದೆ.

**ಕವಿಪ್ರನಿನಿ ಆದೇಶ ಸಂಖ್ಯೆ: ಕವಿಪ್ರನಿನಿ/ಬಿ9/68288/2017-18 ದಿನಾಂಕ** 07 SEP 2023

ದಿನಾಂಕ 19/07/2023 ರ 140 ನೇ ಕವಿಪ್ರನಿನಿ ಮಂಡಳಿ ನಿರ್ದೇಶಕರ ಸಭೆಯ ನಡವಳಿಯನ್ವಯ ಹೊನ್ನಾವರ 110 ಕೆ.ವಿ. ಉಪಕೇಂದ್ರದ ಆವರಣದಲ್ಲಿನ ಜಾಗವನ್ನು ಹೆಸ್ಕಾಂ ಗೆ ಈ ಕೆಳಕಂಡ ಷರತ್ತುಗಳನ್ವಯ ಲೀಸ್ ಆಧಾರದ ಮೇಲೆ ನೀಡಲು ಅಗತ್ಯ ಕ್ರಮಕೈಗೊಳ್ಳುವಂತೆ ಮುಖ್ಯ ಇಂಜಿನಿಯರ್ (ವಿ), ಪ್ರಸರಣ ವಲಯ, ಬಾಗಲಕೋಟೆ ರವರಿಗೆ ನಿರ್ದೇಶನ ನೀಡಲಾಗಿದೆ.

1. ಹೊನ್ನಾವರ 110 ಕೆ.ವಿ. ಉಪಕೇಂದ್ರದ ಆವರಣದಲ್ಲಿ ನೂತನ ವಿಭಾಗೀಯ ಕಛೇರಿ ಕಟ್ಟಡ ನಿರ್ಮಿಸಲು 60 ಮೀ. X 68 ಮೀ. ಅಳತೆಯ ಜಾಗವನ್ನು 30 ವರ್ಷಗಳ ಲೀಸ್ ಆಧಾರದ ಮೇಲೆ ಹೆಸ್ಕಾಂ ಗೆ ಹಂಚಿಕೆ ಮಾಡುವುದು.

2. ಬಾಗಲಕೋಟೆ ಪ್ರಸರಣ ವಲಯ ವ್ಯಾಪ್ತಿಯಲ್ಲಿ ಹೆಸ್ಕಾಂನಿಂದ ಬಾಕಿಯಿರುವ ನಿಗಮದ ಕಟ್ಟಡಗಳ ಬಾಡಿಗೆ, ನೀರು ಸರಬರಾಜು ವೆಚ್ಚ ಹಾಗೂ ನಿಗಮದ ಜಾಗಗಳ ಲೀಸ್ ಮೊತ್ತ ನಿಗಮದ ಕಟ್ಟಡಗಳ ನಿರ್ವಹಣಾ ವೆಚ್ಚ ಇತ್ಯಾದಿಗಳನ್ನು ಪಾವತಿಸಿಕೊಂಡು ನಂತರ ಪ್ರಸ್ತಾಪಿಸಿರುವ ಜಾಗವನ್ನು ಹೆಸ್ಕಾಂಗೆ ಹಸ್ತಾಂತರಿಸುವುದು.

3. ಸದರಿ ಜಾಗವನ್ನು ಹೆಸ್ಕಾಂ ಗೆ ನೀಡುವ ಸಂಬಂಧ ಕಾರ್ಯನಿರ್ವಾಹಕ ಇಂಜಿನಿಯರ್ (ವಿ), ಟಿ.ಎಲ್ ಮತ್ತು ಎಸ್.ಎಸ್ ವಿಭಾಗ, ಶಿರಸಿ ರವರು ಹೆಸ್ಕಾಂನೊಂದಿಗೆ ಲೀಸ್ ಒಪ್ಪಂದ ಮಾಡಿಕೊಳ್ಳುವುದು.

4. ಸದರಿ ಜಾಗದ ಹಾಲಿ ಮಾರ್ಗಸೂಚಿ ಬೆಲೆಯನ್ವಯ ಹಾಗೂ ಕವಿಪ್ರನಿನಿ ಮತ್ತು ಎಸ್ಕಾಂ ಗಳ ನಡುವೆ ಹಾಲಿ ಇರುವ Arms-length arrangement ನ ನಿಯಮಗಳಂತೆ, ವಾರ್ಷಿಕ ಲೀಸ್ ಮೊತ್ತವನ್ನು ಲೆಕ್ಕಾಚಾರ ಮಾಡಿ ಪಾವತಿಸುವಂತೆ, ಹೆಸ್ಕಾಂ ಗೆ ಸೂಚಿಸುವುದು.

5. ಸದರಿ ಲೀಸ್ ಮೊತ್ತವನ್ನು ಪ್ರತಿ 5 ವರ್ಷಗಳಿಗೊಮ್ಮೆ, ಅಂದಿನ ಮಾರ್ಗಸೂಚಿ ಬೆಲೆಯನ್ವಯ ಹಾಗೂ Arms-length arrangement ನ ನಿಯಮಗಳನ್ವಯ, ಪರಿಷ್ಕರಿಸುವುದು. ಹಾಗೂ ವಾರ್ಷಿಕ ಲೀಸ್ ಮೊತ್ತವನ್ನು, ಪ್ರತಿ ವರ್ಷ ಏಪ್ರಿಲ್ ಮಾಹೆಯ ಮೊದಲ ವಾರದಲ್ಲಿ, ಮುಂಗಡವಾಗಿ ಶಿರಸಿ, ಟಿ.ಎಲ್ ಮತ್ತು ಎಸ್.ಎಸ್ ವಿಭಾಗಕ್ಕೆ ಪಾವತಿಸುವಂತೆ ಹೆಸ್ಕಾಂ ಗೆ ಸೂಚಿಸುವುದು.

6. ಹೆಸ್ಕಾಂ ಗೆ ನೀಡಲು ಅನುಮೋದಿಸಿರುವ ಜಾಗವನ್ನು, ಉದ್ದೇಶಿತ ಕಟ್ಟಡ ನಿರ್ಮಾಣಕ್ಕೆ ಮಾತ್ರ ಉಪಯೋಗಿಸುವಂತೆ ಹಾಗೂ ಬೇರೆ ಯಾವುದೇ ಉದ್ದೇಶಕ್ಕೆ ಬಳಸಬಾರದೆಂಬ, ಷರತ್ತನ್ನು ವಿಧಿಸುವುದು.

7. ಹೆಸ್ಕಾಂ ಗೆ ನೀಡಲು ಅನುಮೋದಿಸಿರುವ ಜಾಗದ ಕರಾರು ಒಪ್ಪಂದ ಮಾಡಿಕೊಂಡ ದಿನದಿಂದ, ಒಂದು ವರ್ಷದ ಅವಧಿಯೊಳಗೆ, ಉದ್ದೇಶಿತ ಕಟ್ಟಡ ನಿರ್ಮಾಣಕ್ಕೆ ಕ್ರಮಕೈಗೊಳ್ಳುವಂತೆ ತಿಳಿಸುವುದು, ಇಲ್ಲವಾದ್ದಲ್ಲಿ, ಒಪ್ಪಂದದ ಕರಾರು ರದ್ದಾಗುವುದೆಂಬ ಷರತ್ತನ್ನು ವಿಧಿಸುವುದು.

8. ನಿಗಮ ಲೀಸ್ ನೀಡಲು ಅನುಮೋದಿಸಿರುವ ಜಾಗ ಒತ್ತುವರಿಯಾಗದಂತೆ ಸಂರಕ್ಷಿಸಿಕೊಳ್ಳಲು ಸೂಕ್ತ ಕ್ರಮಕೈಗೊಳ್ಳಲು ಹೆಸ್ಕಾಂ ಗೆ ಸೂಚಿಸುವುದು.

9. ಲೀಸ್ ಆಧಾರದ ಮೇಲೆ ಹೆಸ್ಕಾಂ ಗೆ ನೀಡಲು ಅನುಮೋದಿಸಿರುವ ಜಾಗದ ಬಗ್ಗೆ, ಟಿ.ಎಲ್ ಮತ್ತು ಎಸ್.ಎಸ್ ವಿಭಾಗದ ಆಸ್ತಿ ಪುಸ್ತಕದಲ್ಲಿ, ಅಗತ್ಯ ದಾಖಲಾತಿಗಳನ್ನು ಮಾಡುವುದು.

10. ಹೆಸ್ಕಾಂ ಗೆ ನೀಡಲು ಅನುಮೋದಿಸಿರುವ ಜಾಗದ ಬಗ್ಗೆ, ನಿಗಮದ ದಿನಾಂಕ 29/04/2005 ರ ಆದೇಶ ಹಾಗೂ 26/10/2006 ಸುತ್ತೋಲೆಯಲ್ಲಿ ತಿಳಿಸಿರುವ Arms-length arrangement ನ ನಿಯಮಗಳನ್ವಯ ಮುಂದಿನ ಅಗತ್ಯ ಕ್ರಮಕೈಗೊಳ್ಳುವುದು.

**"ಆದೇಶದ ಮೇರೆಗೆ"**

**ನಿರ್ದೇಶಕರು (ಆ ಮತ್ತು ಮಾ.ಸಂ)**
**ಕವಿಪ್ರನಿನಿ, ಬೆಂಗಳೂರು.**

**ಪ್ರತಿಗಳು:-**
1. ವ್ಯವಸ್ಥಾಪಕ ನಿರ್ದೇಶಕರು, ಹುಬ್ಬಳ್ಳಿ ವಿದ್ಯುತ್ ಸರಬರಾಜು ಕಂಪನಿ, ಹುಬ್ಬಳ್ಳಿ
2. ಮುಖ್ಯ ಇಂಜಿನಿಯರ್ (ವಿ), ಪ್ರಸರಣ ವಲಯ, ಕವಿಪ್ರನಿನಿ, ಬಾಗಲಕೋಟೆ.
3. ಆರ್ಥಿಕ ಸಲಹೆಗಾರರು (ಲೆ ಮತ್ತು ಸಂ) / (ಆಂತರಿಕ ಪರಿಶೋಧನೆ), ಕವಿಪ್ರನಿನಿ.
4. ಕಂಪನಿ ಕಾರ್ಯದರ್ಶಿ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
5. ಅಧೀಕ್ಷಕ ಇಂಜಿನಿಯರ್ (ವಿ), ಪ್ರಸರಣ (ಕಾ ಮತ್ತು ನಿ) ವೃತ್ತ, ಕವಿಪ್ರನಿನಿ, ಹುಬ್ಬಳ್ಳಿ.
6. ಅಧೀಕ್ಷಕ ಇಂಜಿನಿಯರ್ (ಸಿವಿಲ್), ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
7. ಅಧೀಕ್ಷಕ ಇಂಜಿನಿಯರ್ (ವಿ), (ಐಟಿ) - ನಿಗಮದ ಅಂತರ್ಜಾಲದಲ್ಲಿ ಪ್ರಕಟಿಸಲು.
8. ಲೆಕ್ಕ ನಿಯಂತ್ರಣಾಧಿಕಾರಿ, ಪ್ರಸರಣ ವಲಯ, ಕವಿಪ್ರನಿನಿ, ಬಾಗಲಕೋಟೆ.
9. ಕಾರ್ಯನಿರ್ವಾಹಕ ಇಂಜಿನಿಯರ್ (ವಿ), ಟಿ.ಎಲ್ ಮತ್ತು ಎಸ್.ಎಸ್ ವಿಭಾಗ, ಕವಿಪ್ರನಿನಿ, ಶಿರಸಿ.
10. ಕಾರ್ಯನಿರ್ವಾಹಕ ಇಂಜಿನಿಯರ್ (ಸಿವಿಲ್), ಪ್ರಸರಣ ವಲಯ, ಕವಿಪ್ರನಿನಿ, ಬಾಗಲಕೋಟೆ.
11. ಉಪಲೆಕ್ಕ ನಿಯಂತ್ರಣಾಧಿಕಾರಿ (ಆಂತರಿಕ ಪರಿಶೋಧನೆ), ಪ್ರಸರಣ ವಲಯ, ಕವಿಪ್ರನಿನಿ, ಬಾಗಲಕೋಟೆ.
12. ವ್ಯವಸ್ಥಾಪಕ ನಿರ್ದೇಶಕರು / ನಿರ್ದೇಶಕರು (ಪ್ರಸರಣ) / ನಿರ್ದೇಶಕರು (ಹಣಕಾಸು) / ನಿರ್ದೇಶಕರು (ಆ ಮತ್ತು ಮಾ. ಸಂ) ರವರುಗಳ ಹಿರಿಯ ಆಪ್ತ ಕಾರ್ಯದರ್ಶಿಗಳು, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
13. ಲೆಕ್ಕಾಧಿಕಾರಿ (ಕೋಡಿಫಿಕೇಷನ್), ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.